## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಕ್ಷಿಣ ಕನ್ನಡ ಜಿಲ್ಲೆ, ಬಂಟ್ವಾಳ ತಾಲ್ಲೂಕಿನ ಸರಪಾಡಿ ಮತ್ತು ಇತರೆ 95 ಜನವಸತಿಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** ಸರ್ಕಾರದ ಆದೇಶ ಸಂ:ಗ್ರಾಅಪ 64 ಗ್ರಾನೀಸ(5)16 ದಿನಾಂಕ:05.06.2017.

---

**ಪೀಠಿಕೆ:**

ದಕ್ಷಿಣ ಕನ್ನಡ ಜಿಲ್ಲೆ, ಬಂಟ್ವಾಳ ತಾಲ್ಲೂಕಿನ ಸರಪಾಡಿ ಮತ್ತು ಇತರೆ 95 ಜನವಸತಿಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಮೇಲೆ ಓದಲಾದ(1)ರ ಸರ್ಕಾರದ ಆದೇಶದಲ್ಲಿ ರೂ.2993.62ಲಕ್ಷ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಈ ಯೋಜನೆಯ ತಾಂತ್ರಿಕ ಮಂಜೂರಾತಿಯನ್ನು ರೂ.3290.00ಲಕ್ಷಗಳಿಗೆ ನೀಡಲಾಗಿದೆ. ಮೂಲ ಅಂದಾಜು ಪಟ್ಟಿಯ ಗುತ್ತಿಗೆಗೆ ಇಟ್ಟ ಮೊತ್ತ ರೂ.3162.93ಲಕ್ಷ ಹಾಗೂ DPR ತಯಾರಿಕೆ, ಇತರೆ ವೆಚ್ಚಗಳು ಮತ್ತು ವಿದ್ಯುದ್ಧೀಕರಣ ಮೊತ್ತ ರೂ.127.06ಲಕ್ಷ ಸೇರಿ ಒಟ್ಟು ರೂ.3290.00ಲಕ್ಷಗಳಾಗಿದೆ. KTPP ಕಾಯ್ದೆಯನ್ವಯ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಮೊತ್ತ ರೂ.3315.32ಲಕ್ಷಗಳಾಗಿದೆ. ಟೆಂಡರ್ ಅಂಗೀಕರಿಸುವ ಪ್ರಾಧಿಕಾರ (TAA)ವು ಗುತ್ತಿಗೆದಾರರು ನಮೂದಿಸಿದ್ದ, ರೂ.3315.32ಲಕ್ಷ ಟೆಂಡರ್‌ನ್ನು ಅನುಮೋದಿಸಲು ತೀರ್ಮಾನ ಕೈಗೊಂಡಿದೆ.

ಈ ಟೆಂಡರ್ ಮೊತ್ತದ ಹೆಚ್ಚಳದಿಂದ ಉದ್ದೇಶಿತ ಯೋಜನೆಯ ಅಂದಾಜು ಪರಿಷ್ಕೃತಗೊಂಡಿದ್ದು, ಪರಿಷ್ಕೃತ ಅಂದಾಜು ರೂ.3442.38ಲಕ್ಷಗಳಾಗಿದೆ. ಮೂಲ ಅಂದಾಜು ಮೊತ್ತಕ್ಕೆ ಹೋಲಿಸಿದಲ್ಲಿ ರೂ.448.76ಲಕ್ಷ ಹೆಚ್ಚಳವಾಗುತ್ತದೆ. ಸದರಿ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತ ರೂ.3442.38ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 64 ಗ್ರಾನೀಸ(5) 2016 ಬೆಂಗಳೂರು, ದಿನಾಂಕ:22.05.2018.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆ, ಬಂಟ್ವಾಳ ತಾಲ್ಲೂಕಿನ ಸರಪಾಡಿ ಮತ್ತು ಇತರೆ 95 ಜನವಸತಿಗಳಿಗೆ ನೀರು ಪೂರೈಕೆ ವ್ಯವಸ್ಥೆ ಕಲ್ಪಿಸಲು **ರೂ.3442.38ಲಕ್ಷ (ಮೂರು ಸಾವಿರದ ನಾಲ್ಕುನೂರ ನಲವತ್ತೆರಡು ಲಕ್ಷದ ಮೂವತ್ತೆಂಟು ಸಾವಿರ ರೂಪಾಯಿಗಳು ಮಾತ್ರ)** ಗಳ ಪರಿಷ್ಕೃತ ಅಂದಾಜು ಮೊತ್ತಕ್ಕೆ 5 ವರ್ಷಗಳ O&M ಬಾಬ್ತು ಸೇರಿದಂತೆ ಕೇಂದ್ರ ಮತ್ತು ರಾಜ್ಯ ವಲಯದ NRDWP (C&Q) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. **ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ:**

(ಅ) ಈ ಅನುಮೋದಿತ ಕುಡಿಯುವ ನೀರಿನ ಯೋಜನೆ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಗಳ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2018-19ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಈ) ಈ ಯೋಜನೆ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಉ) ಈ ಯೋಜನೆಯ ಬಂಡವಾಳ ಹೂಡಿಕೆ (DBOT ಪದ್ಧತಿ ಹೊರತಾದ ಯೋಜನೆಗಳಿಗೆ) ಕೇಂದ್ರ ಮತ್ತು ರಾಜ್ಯ ವಲಯದ NRDWP ಯೋಜನೆಯಡಿ ಕ್ರಮವಾಗಿ 50:50 ಅನುಪಾತದಲ್ಲಿರುತ್ತದೆ.

(ಊ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 24 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಋ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ/ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಎ) ಯೋಜನೆ ಅನುಷ್ಠಾನಗೊಂಡು ಕಾರ್ಯಗತಗೊಳಿಸಿ, ಗುತ್ತಿಗೆದಾರರ 5 ವರ್ಷಗಳ O&M ಅವಧಿ ಮುಕ್ತಾಯಗೊಂಡ ನಂತರ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸ್ಥಳೀಯ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSSC) / ಸಂಬಂಧಿಸಿದ ಗ್ರಾಮ ಪಂಚಾಯತ್ / ಪಾರದರ್ಶಕ ನೀತಿಯನ್ವಯ ಆಯ್ಕೆ ಮಾಡಿದ ಸರ್ಕಾರೇತರ ಸಂಸ್ಥೆ / ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

(ಏ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

(ಐ) ನೀರೆತ್ತುವ ಪ್ರಮಾಣವನ್ನು ಸೂಕ್ತ ರೀತಿಯಲ್ಲಿ ಅಳತೆ ಮಾಡುವ ಸಲುವಾಗಿ ಅಗತ್ಯ ಮಾಪಕವನ್ನು ನದಿಯ ಹತ್ತಿರ / ಜಲಾಶಯದ ಬಳಿ ಅಳವಡಿಸಿಕೊಳ್ಳತಕ್ಕದ್ದು ಹಾಗೂ ತತ್ಸಂಬಂಧದ ಬಾಬ್ತಿನ ವೆಚ್ಚವನ್ನು ಸ್ಥಳೀಯ ಪಂಚಾಯತ್ ಭರಿಸಬೇಕು.

3. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂ:ಆಇ 187 ವೆಚ್ಚ-6 2018 ದಿನಾಂಕ:13.03.2018ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
7. ಸರ್ಕಾರದ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು
8. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, ಕೆಹೆಚ್‌ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು–09.
11. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ದಕ್ಷಿಣ ಕನ್ನಡ**.
12. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, **ದಕ್ಷಿಣ ಕನ್ನಡ**
13. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ ಕಛೇರಿ, **ಮೈಸೂರು**.
14. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ದಕ್ಷಿಣ ಕನ್ನಡ**
15. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1
16. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿ ಭವನ, ಬೆಂಗಳೂರು.
17. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
18. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ
19. ಆಯುಕ್ತರು, ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ / ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಇವರುಗಳ ಆಪ್ತ ಸಹಾಯಕರು
20. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
23. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ).
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ–10ಪ್ರತಿಗಳು.
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.